# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 269 |
| ಮಾನ್ಯ ಸದಸ್ಯರ ಹೆಸರು | : | ಡಾ.ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 15.02.2024 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಗಿರಿಧಾಮಗಳಿಗೆ ರೋಪ್-ವೇ ಅಳವಡಿಸುವ ಪ್ರಸ್ತಾಪ ಸರ್ಕಾರದ ಹಂತದಲ್ಲಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯ ಪ್ರಸ್ತಾಪ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಹೌದು,<br><br>ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮದಲ್ಲಿ ಹಾಗೂ ಶಿವಮೊಗ್ಗ ಜಿಲ್ಲೆಯ ಜೋಗ ಜಲಪಾತ ಪ್ರದೇಶದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಪ್ರಯಾಣಿಕರ ರೋಪ್ ವೇಗಳ ಅಭಿವೃದ್ಧಿ ಮತ್ತು ಕಾರ್ಯಾಚರಣೆ ಕಾಮಗಾರಿಗಳನ್ನು ಕೈಗೊಳ್ಳಲು ರಿಯಾಯಿತಿದಾರರನ್ನು ಆಯ್ಕೆಮಾಡಿ ರಿಯಾಯಿತಿ ಒಪ್ಪಂದ ಮಾಡಲಾಗಿರುತ್ತದೆ.<br><br>ಮುಂದುವರೆದು, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಮಂತ್ರಾಲಯವು ಪರ್ವತಮಾಲಾ ಯೋಜನೆಯಡಿ ಕೊಡಚಾದ್ರಿ ಬೆಟ್ಟಕ್ಕೆ ರೋಪ್-ವೇ ಅಳವಡಿಸಲು ಸದರಿ ಇಲಾಖೆಯ ಅಂಗ ಸಂಸ್ಥೆಯಾದ ಮೆ: NATIONAL HIGHWAYS LOGISTICS MANAGEMENT LIMITED (NHLML) ರವರ ಮೂಲಕ ಕ್ರಮವಹಿಸುತ್ತಿದೆ.<br><br>ಇದಲ್ಲದೇ, ರಾಜ್ಯದ ಈ ಕೆಳಕಂಡ ಪ್ರವಾಸಿ ತಾಣಗಳಲ್ಲಿ ರೋಪ್-ವೇ ಗಳನ್ನು ರಾಜ್ಯ ಸರ್ಕಾರದಿಂದ ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿ.ಪಿ.ಪಿ) ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿರುತ್ತದೆ:<br><br>1. ತುಮಕೂರು ಜಿಲ್ಲೆಯ ಮಧುಗಿರಿ ಏಕಶಿಲಾ ಬೆಟ್ಟ<br>2. ಸವದತ್ತಿಯ ಯಲ್ಲಮ್ಮನ ಗುಡ್ಡ<br>3. ಹಾವೇರಿ ಜಿಲ್ಲೆಯ ದೇವರಗುಡ್ಡ<br>4. ಗದಗ ಜಿಲ್ಲೆಯ ಶ್ರೀ ಹೊಳಲಮ್ಮನ ದೇವಸ್ಥಾನ<br>5. ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟ<br>6. ಧಾರವಾಡ ಜಿಲ್ಲೆಯ ಹುಬ್ಬಳ್ಳಿಯ ನೃಪತುಂಗ ಬೆಟ್ಟ<br>7. ಗದಗ ಜಿಲ್ಲೆಯ ಗಜೇಂದ್ರಗಡದ ಶ್ರೀ ಕಾಲಕಾಲೇಶ್ವರ ದೇವಸ್ಥಾನ<br>8. ಯಾದಗಿರಿ ಕೋಟೆ<br>9. ಬಳ್ಳಾರಿ ಕೋಟೆ<br><br>ಸದರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅಗತ್ಯವಾಗಿರುವ ಕಾರ್ಯಸಾಧ್ಯತಾ ವರದಿಯನ್ನು ಸಿದ್ಧಪಡಿಸಿಕೊಳ್ಳಲು ಸೂಕ್ತ ವಹಿವಾಟು ಸಲಹೆಗಾರರನ್ನು ಆಯ್ಕೆ ಮಾಡಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಆ) | ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮವು ಪ್ರವಾಸಿಗರ ಆಕರ್ಷಣೆಯ ಕೇಂದ್ರವಾಗಿದ್ದು, ಈ ಗಿರಿಧಾಮಕ್ಕೆ ರೋಪ್-ವೇ ಅಳವಡಿಸುವಲ್ಲಿ ಸರ್ಕಾರ ಕ್ರಮವಹಿಸುವುದೆ; ಹಾಗಿದ್ದಲ್ಲಿ, ಇನ್ನೂ ಎಷ್ಟು ಅವಧಿಯೊಳಗಾಗಿ ರೋಪ್-ವೇ ಕಾರ್ಯವನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು) | ಹೌದು,<br><br>ಈಗಾಗಲೇ ನಂದಿ ಗಿರಿಧಾಮದಲ್ಲಿ ರೋಪ್ ವೇ ನಿರ್ಮಾಣ ಮಾಡಲು ಅವಶ್ಯವಿರುವ Lower Terminal Point (LTP) ಪ್ರದೇಶದ ಜಮೀನನ್ನು ಪ್ರವಾಸೋದ್ಯಮ ಇಲಾಖೆ ಹೆಸರಿಗೆ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ರವರು ಹಸ್ತಾಂತರಿಸಿರುತ್ತಾರೆ.<br><br>ಮುಂದುವರೆದು Upper Terminal Point (UTP) ಪ್ರದೇಶದ ನಿವೇಶನವು ತೋಟಗಾರಿಕೆ ಇಲಾಖೆಯ Parks & amp; Preservation Act ಅಧಿನಿಯಮದಡಿ ಬರುವುದರಿಂದ ಸದರಿ ಜಾಗವನ್ನು ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಲು ಸಚಿವ ಸಂಪುಟ ಸಭೆಯ ಅನುಮತಿ ಅವಶ್ಯವಿರುವುದರಿಂದ ಪ್ರಸ್ತಾವನೆಯನ್ನು ತೋಟಗಾರಿಕೆ ಇಲಾಖೆಗೆ ಕಳುಹಿಸಲು ಕ್ರಮವಹಿಸಲಾಗುತ್ತಿದೆ. ತೋಟಗಾರಿಕೆ ಇಲಾಖೆಯಿಂದ ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರವಾದ ನಂತರ ಹಾಗೂ Right of Ways (Towers) ಗಳನ್ನು ನಿರ್ಮಿಸಲು ಅರಣ್ಯ ಇಲಾಖೆ ವತಿಯಿಂದ ನಿರಾಕ್ಷೇಪಣಾ ಪತ್ರ (NOC) ಬಂದ ನಂತರ ರಿಯಾಯಿತಿದಾರರಿಗೆ ಹಸ್ತಾಂತರಿಸಿ, ರೋಪ್-ವೇ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುವುದು. |

**ಸಂಖ್ಯೆ: TOR 50 TDV 2024**

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು